Akashvani : Bangalore
Regional Bulletin In Kannada
03.01.2026 / 14.30 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
<><*<><>*><>
ಮುಖ್ಯಾಂಶಗಳು

೧. ಪ್ರಧಾನಿ ಬಗ್ಗೆ ಅಸಂವಿಧಾನಿಕ ಪದ ಬಳಕೆ; ಮೇಲ್ಮನೆಯಲ್ಲಿ ಸದಸ್ಯ ನಜೀರ್ ಅಹಮ್ಮದ್ ಅಮಾನತಿಗೆ ಬಿಜೆಪಿ ಪಟ್ಟು

೨. ಅಬಕಾರಿ ಇಲಾಖೆಯಲ್ಲಿ ಭ್ರಷ್ಟಾಚಾರ ಆರೋಪ; ವಿಧಾನಸಭೆಯಲ್ಲಿ ಸಚಿವ ಆರ್.ಬಿ.ತಿಮ್ಮಾಪುರ ರಾಜೀನಾಮೆಗೆ ಪ್ರತಿಪಕ್ಷಗಳ ಆಗ್ರಹ

೩. ಬೆಂಗಳೂರಿನಲ್ಲಿ ಇದೇ ೨೭ ರಿಂದ ಮೂರು ದಿನ ಜಿಎಎಫ್‌ಎಕ್ಸ್ ಸಮ್ಮೇಳನ

೪. ಉದ್ಯಮಿ ಸಿ.ಜೆ.ರಾಯ್ ಆತ್ಮಹತ್ಯೆ ಪ್ರಕರಣದ ತನಿಖೆ ಪ್ರಗತಿಯಲ್ಲಿ - ಗೃಹ ಸಚಿವ ಡಾ.ಜಿ.ಪರಮೇಶ್ವರ್

೫. ಚಾಮರಾಜನಗರದ ಹನೂರಿನಲ್ಲಿ ನೀರು ಸೇವನೆಯಿಂದ ಮೂತ್ರಪಿಂಡ ಸಮಸ್ಯೆ ಇಲ್ಲ- ಆರೋಗ್ಯ ಇಲಾಖೆ ಸ್ಪಷ್ಟನೆ

<><*<><>*><>

ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಆಕ್ಷೇಪಾರ್ಹ ಹೇಳಿಕೆ ಖಂಡಿಸಿ ಕಾಂಗ್ರೆಸ್ ಸದಸ್ಯ ನಜೀರ್ ಅಹ್ಮದ್ ಅವರನ್ನು ತಕ್ಷಣವೇ ಸದನದಿಂದ ಅಮಾನತುಗೊಳಿಸಬೇಕೆಂದು ಒತ್ತಾಯಿಸಿ ವಿಧಾನ ಪರಿಷತ್ತಿನಲ್ಲಿ ಇಂದು ವಿಪಕ್ಷ ಬಿಜೆಪಿ ಧರಣಿ ನಡೆಸಿತು. ಸದನ ಆರಂಭವಾಗುತ್ತಿದ್ದಂತೆಯೇ ಬಿಜೆಪಿ ಸದಸ್ಯರು, ಸದನದ ಬಾವಿಗಿಳಿದು ಪ್ರತಿಭಟನೆ ನಡೆಸಿದರು. ದೇಶದ ಪ್ರಧಾನಿ ಬಗ್ಗೆ ಯಾರು ಈ ರೀತಿ ಮಾತನಾಡುವುದಿಲ್ಲ. ಮುಖ್ಯಮಂತ್ರಿ ರಾಜಕೀಯ ಕಾರ್ಯದರ್ಶಿ ಆಗಿ ನಜೀರ್ ಅಹ್ಮದ್ ಈ ರೀತಿಯಲ್ಲಿ ಮಾತನಾಡುವುದು ಸರಿಯಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದರು. ನಜೀರ್ ಅಹ್ಮದ್ ಅಮಾನತ್ತಿಗೆ ಆಗ್ರಹಿಸಿ, ಘೋಷಣೆ ಕೂಗಿದರು. ಆಗ ಸಭಾಪತಿ ಹೊರಟ್ಟಿ ಅವರು, ಬಾವಿಯಲ್ಲಿದ್ದು ಘೋಷಣೆ ಕೂಗಬಾರದು. ಸದಸ್ಯರಿಗೆ ಕಾನೂನು ಗೊತ್ತಿಲ್ಲವೇ ಎಂದು ಪ್ರಶ್ನಿಸಿದರು. ಬಳಿಕ ಸಭಾಪತಿ ನಜೀರ್ ಅಹ್ಮದ್ ಕ್ಷಮೆ ಕೇಳುವಂತೆ ಸೂಚನೆ ನೀಡಿದರು. ಆಗ ನಜೀರ್ ಅಹ್ಮದ್ ಮಾತನಾಡಿ, ಪ್ರಧಾನಿ ಮೋದಿಯವರು ಇಲ್ಲ ಎಂದರೆ ದೇಶ ಇಲ್ಲ ಎಂದು ಬಿಜೆಪಿ ಸದಸ್ಯರು ಹೇಳಿದ್ದರು. ಹೀಗಾಗಿ ನಾನು ಈ ರೀತಿಯ ಪ್ರತಿಕ್ರಿಯೆ ನೀಡಿದ್ದಾಗಿ ಸ್ಪಷ್ಟನೆ ನೀಡಿದರು. ಈ ಹಂತದಲ್ಲಿ ವಿಪಕ್ಷ ಮತ್ತು ಆಡಳಿತ ಪಕ್ಷದ ಸದಸ್ಯರ ನಡುವೆ ಮಾತಿನ ಚಕಮಕಿ ನಡೆಯಿತು. ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಮಧ್ಯಪ್ರವೇಶಿಸಿ, ಯಾವುದೇ ಸ್ಪಷ್ಟನೆ ಕೊಡುವುದು ಬೇಡ. ಅವರ ವಿರುದ್ಧ ಕ್ರಮ ಕೈಗೊಳ್ಳಿ ಎಂದು ಆಗ್ರಹಿಸಿದರು. ಈ ಸಂದರ್ಭದಲ್ಲಿ ತೀವ್ರ ಗದ್ದಲ, ಮಾತಿನ ಚಕಮಕಿ ಉಂಟಾದ ಹಿನ್ನೆಲೆಯಲ್ಲಿ ಸಭಾಪತಿ ಬಸವರಾಜ ಹೊರಟ್ಟಿ ಐದು ನಿಮಿಷಗಳ ಕಾಲ ಸದನವನ್ನು ಮುಂದೂಡಿದರು.

<><*<><>*><>

ಅಬಕಾರಿ ಇಲಾಖೆಯಲ್ಲಿ ನಡೆದ ಸಾವಿರಾರು ಕೋಟಿ ಭ್ರಷ್ಟಾಚಾರ ಹಗರಣದ ನೈತಿಕ ಜವಾಬ್ದಾರಿ ಹೊತ್ತು ಅಬಕಾರಿ ಸಚಿವ ಆರ್.ಬಿ.ತಿಮ್ಮಾಪುರ ರಾಜೀನಾಮೆ ನೀಡಬೇಕು ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಒತ್ತಾಯಿಸಿದ್ದಾರೆ. ವಿಧಾನಸಭೆಯಲ್ಲಿಂದು ಕಲಾಪ ಆರಂಭವಾಗುತ್ತಿದ್ದಂತೆ ನಿಯಮ ೬೯ ಅಡಿಯಲ್ಲಿ ಚರ್ಚೆಯಲ್ಲಿ ಭಾಗವಹಿಸಿ ಮಾತನಾಡಿದ ಆರ್.ಅಶೋಕ ಅಬಕಾರಿ ಇಲಾಖೆಯಲ್ಲಿ ನಡೆಯುತ್ತಿರುವ ವ್ಯಾಪಕ ಭ್ರಷ್ಟಾಚಾರದ ಬಗ್ಗೆ ಪ್ರಸ್ತಾಪಿಸಿ ಸರ್ಕಾರವನ್ನು ತರಾಟೆಗೆ ತಗೆದುಕೊಂಡರು.  ಅಬಕಾರಿ ಇಲಾಖೆ ಸರ್ಕಾರಕ್ಕೆ ಅತಿ ಹೆಚ್ಚು ಆದಾಯ ತಂದು ಕೊಡುವ ಇಲಾಖೆಯಾಗಿದೆ. ಅಬಕಾರಿ ಇಲಾಖೆ ಭ್ರಷ್ಟಾಚಾರದಲ್ಲಿ ನಂಬರ್ ಒನ್ ಆಗಿದೆ ಎಂದು ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು. ಪ್ರತಿವರ್ಷ ಟಾರ್ಗೆಟ್ ನೀಡಿ ಆದಾಯ ವಸೂಲಿ ಮಾಡಲಾಗುತ್ತದೆ ಎಂದು ಅಬಕಾರಿ ಇಲಾಖೆಯ ಲಂಚಾವತಾರವನ್ನು ಸದನದಲ್ಲಿ ಎಳೆ ಎಳೆಯಾಗಿ ಬಿಚ್ಚಿಟ್ಟಿದ್ದಾರೆ.

<><*<><>*><>

ಮಾಹಿತಿ ತಂತ್ರಜ್ಞಾನ ಹಾಗೂ ಜೈವಿಕ ತಂತ್ರಜ್ಞಾನ ಇಲಾಖೆ ವತಿಯಿಂದ ಆನಿಮೇಷನ್, ದೃಶ್ಯ ಪರಿಣಾಮಗಳು ಕುರಿತ ಬೆಂಗಳೂರು ಜಿಎಎಫ್‌ಎಕ್ಸ್-೨೦೨೬ರ ಏಳನೇ ಆವೃತ್ತಿಯ ವಾರ್ಷಿಕ ಸಮ್ಮೇಳನ ಇದೇ ೨೭ ರಿಂದ ಮಾರ್ಚ್ ೧ ರವರೆಗೆ ಬೆಂಗಳೂರಿನಲ್ಲಿ ನಡೆಯಲಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸಮ್ಮೇಳನದ ಕೈಪಿಡಿ ಬಿಡುಗಡೆ ಮಾಡಿ, ಮಾತನಾಡಿದ ಅವರು, ಇದು ಏಷ್ಯಾದ ಅತಿ ದೊಡ್ಡ ಆನಿಮೇಷನ್ ದೃಶ್ಯ ಪರಿಣಾಮಗಳ ಸಮ್ಮೇಳನವಾಗಿದೆ ಎಂದು ಹೇಳಿದ್ದಾರೆ. ಸಮ್ಮೇಳನದಲ್ಲಿ ಜಾಗತಿಕ ಮಾಧ್ಯಮ, ಮನರಂಜನಾ ಪರಿಸರ, ವ್ಯವಸ್ಥೆಯ ಕ್ರಿಯೇಟರ್ಸ್, ತಂತ್ರಜ್ಞರು, ಹೂಡಿಕೆದಾರರು ಭಾಗವಹಿಸಲಿದ್ದಾರೆ. ಕರ್ನಾಟಕವು ದೇಶದಲ್ಲೇ ಎವಿಜಿಸಿ ವಲಯವನ್ನು ಮುನ್ನಡೆಸುತ್ತಿದ್ದು, ಶೇಕಡಾ ೨೦ಕ್ಕಿಂತಲೂ ಹೆಚ್ಚು ಪಾಲನ್ನು ಹೊಂದಿದೆ.

<><*<><>*><>

ಉದ್ಯಮಿ ಸಿ.ಜೆ.ರಾಯ್ ಆತ್ಮಹತ್ಯೆ ಪ್ರಕರಣ ಕುರಿತಂತೆ ವಿಶೇಷ ತನಿಖಾ ತಂಡ ರಚಿಸಲಾಗಿದ್ದು, ತನಿಖೆಯ ಫಲಿತಾಂಶದ ಆಧಾರದ ಮೇಲೆ ಅಂತಿಮ ನಿರ್ಧಾರ ಕೈಗೊಳ್ಳುವುದಾಗಿ ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತನಿಖೆ ಪೂರ್ಣಗೊಳ್ಳುವವರಿಗೆ ಯಾವುದೇ ತೀರ್ಮಾನಕ್ಕೆ ಬರಲು ಸಾಧ್ಯವಿಲ್ಲ ಎಂದು ತಿಳಿಸಿದ್ದಾರೆ. ಈಗಾಗಲೇ ಕುಟುಂಬ ಸದಸ್ಯರ ಹಾಗೂ ಸಬಂಧಪಟ್ಟವರಿಂದ ಹೇಳಿಕೆ ದಾಖಲಿಸಲಾಗಿದ್ದು, ಎಸ್‌ಐಟಿ ಅಧಿಕಾರಿಗಳು ತನಿಖೆ ಮುಂದುವರಿಸಿದ್ದಾರೆ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ಮಾರ್ಟಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಫ್ಲೋರೈಡ್‌ಯುಕ್ತ ನೀರು ಸೇವನೆಯಿಂದ ಹಲವು ಮಂದಿ ಮೂತ್ರಪಿಂಡ ಸಮಸ್ಯೆಗೆ ಒಳಗಾಗಿದ್ದಾರೆಂಬ ಆರೋಪವನ್ನು ಚಾಮರಾಜನಗರ ಡಿಎಚ್‌ಒ ಡಾ.ಚಿದಂಬರ ತಳ್ಳಿಹಾಕಿದ್ದಾರೆ. ಪ್ರಯೋಗಾಲಯ ವರದಿ ಪ್ರಕಾರ ಕುಡಿಯಲು ನೀರು ಯೋಗ್ಯವಾಗಿದೆ, ೪೦ ಕ್ಕೂ ಅಧಿಕ ಕಡೆ ನೀರಿನ ಮಾದರಿ  ಪರೀಕ್ಷೆಗೆ ಒಳಪಡಿಸಲಾಗಿದ್ದು ಕುಡಿಯುವ ಗುಣಮಟ್ಟ ಹೊಂದಿದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ಹನೂರು ತಾಲೂಕಿನಲ್ಲಿ ೪೭ ಮಂದಿ ಡಯಾಲಿಸಿಸ್ ಗೆ ನೋಂದಣಿ ಮಾಡಿಕೊಂಡಿದ್ದು ಮಾರ್ಟಳ್ಳಿ ಭಾಗದಲ್ಲಿ ೫ ಮಂದಿ ಮೂತ್ರಪಿಂಡದ ಬಾಧೆಗೆ ಒಳಪಟ್ಟಿದ್ದಾರೆ, ಇವರಲ್ಲಿ ಹುಟ್ಟಿನಿಂದ ಸಮಸ್ಯೆ ಹಾಗೂ ಇನ್ನಿತರೆ ಕಾರಣದಿಂದ ಬಾಧಿತರಾಗಿದ್ದು ನೀರಿನಿಂದ ಮೂತ್ರಪಿಂಡಕ್ಕೆ ಹಾನಿಯಾಗಿದೆ ಎಂಬುದಕ್ಕೆ ದಾಖಲೆ, ಆಧಾರಗಳಿಲ್ಲ ಎಂದು ಸ್ಪಷ್ಟನೆ ನೀಡಿದ್ದಾರೆ.

ಧ್ವನಿ: ಡಿಎಚ್ಒ ಡಾ.ಚಿದಂಬರ ( ೩೧  ಸಕೆಂಡ್ಸ್)

<><*<><>*><>

ಮೂಲ ಲೋಹಗಳಾದ ಚಿನ್ನ,ತಾಮ್ರ, ಅಲ್ಯುಮಿನಿಯಮ್ ಸೇರಿದಂತೆ ವಿವಿಧ ಖನಿಜ ನಿಕ್ಷೇಪಗಳ ಕುರಿತು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಮೇ ೩೧ ರವರೆಗೆ ವೈಮಾನಿಕ ಸಮೀಕ್ಷೆ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಜಿ.ಪ್ರಭು ತಿಳಿಸಿದ್ದಾರೆ. ಬಾಗೇಪಲ್ಲಿ ಮತ್ತು ಗುಡಿಬಂಡೆ ತಾಲ್ಲೂಕುಗಳಲ್ಲಿ ಕಳೆದ ಮೂರ್ನಾಲ್ಕು ದಿನಗಳಿಂದ ನಡೆಯುತ್ತಿರುವ ವೈಜ್ಞಾನಿಕ ಸಮೀಕ್ಷೆ ಕುರಿತು ಮಾಹಿತಿ ನೀಡಿರುವ ಅವರು, ಕೇಂದ್ರ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ೨೦೦೯-೧೦ ರಲ್ಲಿ ಜಿಲ್ಲೆಯಲ್ಲಿನ ಖನಿಜ ನಿಕ್ಷೇಪಗಳ ಬಗ್ಗೆ ಪ್ರಾಥಮಿಕ ಶೋಧ ನಡೆದಿತ್ತು. ಅದರ ಮುಂದುವರೆದ ಭಾಗವಾಗಿ ಜಿಲ್ಲೆಯಲ್ಲಿ ಈಗ ಸಮೀಕ್ಷೆ ನಡೆಯುತ್ತಿದೆ. ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಈ ಸಮೀಕ್ಷೆ ನಡೆಯಲಿದ್ದು, ನಾಗರೀಕರು ಆತಂಕಗೊಳ್ಳುವ ಅಗತ್ಯವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಧ್ವನಿ: ಜಿಲ್ಲಾಧಿಕಾರಿ ಜಿ.ಪ್ರಭು ( ೩೨  ಸೆಕೆಂಡ್ಸ್)

ಕೇಂದ್ರ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಜಿಯಾಲಜಿಕಲ್ ಸರ್ವೆ ಆಫ್ ಇಂಡಿಯಾ-ಜಿಎಸ್ಐ ಸಂಸ್ಥೆ ಹಾಗೂ ಜಿಯೋ ಫಿಸಿಕಲ್ ಸರ್ವೆ ಆಫ್ ಇಂಡಿಯಾ ಸಹಯೋಗದಲ್ಲಿ ಸಮೀಕ್ಷೆ ನಡೆಯುತ್ತಿದೆ.

<><*<><>*><>

ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ಅರಣ್ಯ ವ್ಯಾಪ್ತಿಯ ಚಾರ್ಮಾಡಿ ಘಾಟ್‌ನಲ್ಲಿ ಕಳೆದ ರಾತ್ರಿ ಬೆಂಕಿ ಕಾಣಿಸಿಕೊಂಡಿದ್ದು, ಅಪಾರ ಪ್ರಮಾಣದ ಅರಣ್ಯ ನಾಶವಾಗಿದೆ. ಪಶ್ಚಿಮಘಟ್ಟಗಳ ಸಾಲಿನಲ್ಲಿ ಬರುವ ಈ ಅರಣ್ಯ ವ್ಯಾಪ್ತಿಯಲ್ಲಿ ಮರಗಿಡಗಳು, ಹುಲ್ಲುಗಾವಲು ಪ್ರದೇಶ ಬೆಂಕಿಯಿಂದ ಸುಟ್ಟುಹೊಗಿವೆ. ಕಳೆದ ೧೦ ದಿನಗಳ ಅವಧಿಯಲ್ಲಿ ಚಾರ್ಮಾಡಿ ಘಾಟ್ ಅರಣ್ಯ ಪ್ರದೇಶದಲ್ಲಿ ಸಂಭವಿಸಿದ ಎರಡನೆ ಬೆಂಕಿ ಅವಘಡ ಪ್ರಕರಣ ಇದಾಗಿದೆ. ಸ್ಥಳಕ್ಕೆ ಜಿಲ್ಲೆಯ ಅರಣ್ಯ ಇಲಾಖೆ ಹಾಗೂ ಅಗ್ನಿ ಶಾಮಕ ದಳ ಸಿಬ್ಬಂದಿ ತೆರಳಿದ್ದು ಬೆಂಕಿ ನಂದಿಸುವ ಕಾರ್ಯ ನಡೆಸುತ್ತಿದ್ದಾರೆ.

<><*<><>*><>

ಕೊರೊನಾ ಸಾಂಕ್ರಾಮಿಕ ದಿನಗಳಿಂದ ಸ್ಥಗಿತಗೊಂಡಿದ್ದ ದಾಂಡೇಲಿ ರೈಲು ಸೇವೆ ಪುನರಾರಂಭಗೊಳ್ಳಲಿದೆ ಇದೇ ೭ ರಂದು ಕೇಂದ್ರ ಸಚಿವ ವಿ. ಸೋಮಣ್ಣ ರೈಲಿಗೆ ಚಾಲನೆ ನೀಡಲಿದ್ದಾರೆ ಎಂದು ಉತ್ತರಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ತಿಳಿಸಿದ್ದಾರೆ. ಈ ಭಾಗದ ಜನರ ಬಹುದಿನಗಳ ಬೇಡಿಕೆಗೆ ಕೇಂದ್ರ ರೈಲ್ವೆ ಇಲಾಖೆ ಸ್ಪಂದಿಸಿದ್ದು, ದಾಂಡೇಲಿ ಭಾಗದ ಜನತೆಗೆ ಹಾಗೂ ಸಾರಿಗೆ ಮತ್ತು ಪ್ರವಾಸೋದ್ಯಮ ಕ್ಷೇತ್ರದಲ್ಲಿ ಹೊಸ ಸಂಚಲನ ಮೂಡಲಿದೆ ಎಂದು ಸಂಸದ ಕಾಗೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><*<><>*><>

ನೀರಿನ ಬವಣೆ ನೀಗಿಸುವ ನಿಟ್ಟಿನಲ್ಲಿ ಮಳೆ ನೀರು ಕೊಯ್ಲು ಅಳವಡಿಕೆ ಅತ್ಯಗತ್ಯವಾಗಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಎ.ಬಿ.ಬಸವರಾಜು ತಿಳಿಸಿದ್ದಾರೆ. ಜಿಲ್ಲಾಡಳಿತ ಭವನ ಸಂಕೀರ್ಣ ಕಟ್ಟಡದಲ್ಲಿ ಮಳೆ ನೀರು ಕೊಯ್ಲು ಘಟಕ ಸ್ಥಾಪನೆಗೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ಕಟ್ಟಡದ ಮೇಲೆ ಬೀಳುವ ಮಳೆ ನೀರನ್ನು ಸಂಗ್ರಹಣೆ ಮಾಡಿ ಪುನರ್ ಬಳಕೆ ಮಾಡುವ ಉದ್ದೇಶದಿಂದ ಮಳೆ ನೀರು ಕೊಯ್ಲು ಪದ್ಧತಿ ಅಳವಡಿಸಲಾಗುತ್ತಿದೆ ಎಂದರು.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>